**Akashvani : Bangalore**
**National Bulletin In Kannada**
**08.03.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

೧. ದೇಶದ ಮಹಿಳೆಯರು ಅಭಿವೃದ್ಧಿ ಹೊಂದಿದ ಭಾರತದ ದೃಷ್ಟಿಕೋನ ಸಾಕಾರಗೊಳಿಸುವಲ್ಲಿ ನಿರ್ಣಾಯಕ ಪಾತ್ರ - ರಾಷ್ಟ್ರಪತಿ ದ್ರೌಪದಿ ಮುರ್ಮು

೨. ಸೋಮವಾರದಿಂದ ಸಂಸತ್ತಿನ ಬಜೆಟ್ ಅಧಿವೇಶನದ ಎರಡನೇ ಭಾಗ ಆರಂಭ

೩. ನೆರೆಹೊರೆ ದೇಶಗಳೊಂದಿಗೆ ಉತ್ತಮ ಸಂಬಂಧ ಹೊಂದಲು ಭಾರತ ಪ್ರಯತ್ನಿಸುತ್ತದೆ - ಸಚಿವ ರಾಜನಾಥ್ ಸಿಂಗ್

೪. ಏಷ್ಯನ್ ಕಬ್ಬಡ್ಡಿ ಚಾಂಪಿಯನ್‌ಶಿಪ್; ಐದನೇ ಬಾರಿಗೆ ಪ್ರಶಸ್ತಿ ಮುಡಿಗೇರಿಸಿಕೊಂಡ ಭಾರತೀಯ ಮಹಿಳಾ ತಂಡ

**<><*<><>*><>**

ಭಾರತ, ಜಗತ್ತಿನ ಮೂರನೇ ಅತಿ ದೊಡ್ಡ ಆರ್ಥಿಕತೆಯಾಗುವತ್ತ ಮುನ್ನಡೆಯುತ್ತಿರುವ ಹಿನ್ನೆಲೆಯಲ್ಲಿ ಕಾರ್ಯಪಡೆಯಲ್ಲಿ ಹೆಚ್ಚಿನ ಸಂಖ್ಯೆಯ ಮಹಿಳೆಯರು ಇರಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪ್ರತಿಪಾದಿಸಿದ್ದಾರೆ. ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ನವದೆಹಲಿಯಲ್ಲಿಂದು 'ನಾರಿ ಶಕ್ತಿ ಸೆ ವಿಕಸಿತ್ ಭಾರತ್' ಎಂಬ ವಿಷಯ ಕುರಿತು ದಿನವಿಡೀ ನಡೆದ ಸಮಾವೇಶ ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿಗಳು, ದೇಶದ ಹೆಣ್ಣುಮಕ್ಕಳು ಅಭಿವೃದ್ಧಿ ಹೊಂದಿದ ಭಾರತದ ದೃಷ್ಟಿಕೋನ ಸಾಕಾರಗೊಳಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತಿದ್ದಾರೆ ಎಂದು ಒತ್ತಿ ಹೇಳಿದರು. ಭಾರತ, ಪ್ರಗತಿ ಸಾಧಿಸಲು ಹಾಗೂ ಮಹಿಳೆಯರ ಸಾಮರ್ಥ್ಯವನ್ನು ಸಂಪೂರ್ಣವಾಗಿ ಬಳಸಿಕೊಳ್ಳಲು ನೆರವಾಗುವಂತಹ ಪೂರಕ ಪರಿಸರ ಸೃಷ್ಟಿಸಬೇಕಾದ ಮಹತ್ವವನ್ನು ಅವರು ವಿವರಿಸಿದರು. ದೇಶದಲ್ಲಿ ಮಹಿಳೆಯರು ರಾಜಕೀಯವಾಗಿ, ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸಬಲರಾಗುವುದನ್ನು ಖಾತರಿಪಡಿಸಿಕೊಳ್ಳಲು ಕೇಂದ್ರ ಸರ್ಕಾರ ನಿರಂತರವಾಗಿ ಕೆಲಸ ಮಾಡುತ್ತಿದೆ. ಇದರಿಂದ ಅಭಿವೃದ್ಧಿ ಹೊಂದಿದ ಭಾರತದ ದೃಷ್ಟಿ ಕೋನದತ್ತ ದೇಶವನ್ನು ಮುನ್ನಡೆಸಲು ಸಾಧ್ಯವಾಗುತ್ತದೆ ಎಂದು ರಾಷ್ಟ್ರಪತಿಗಳು ಹೇಳಿದರು. 'ನಾರಿಶಕ್ತಿ ವಂದನಂ' ಅಧಿನಿಯಮದ ಮೂಲಕ ಲೋಕಸಭೆ ಹಾಗೂ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ಒದಗಿಸುವುದು, ರಾಜಕೀಯ ಸಬಲೀಕರಣದತ್ತ ಇರಿಸಿರುವ ಒಂದು ಐತಿಹಾಸಿಕ ಹೆಜ್ಜೆ ಎಂದು ಬಣ್ಣಿಸಿದರು. ಮಹಿಳೆಯರನ್ನು ಸ್ವ-ಸಹಾಯ ಗುಂಪುಗಳ ಮೂಲಕ ಪರಸ್ಪರ ಜೋಡಿಸುವುದು, ಆರ್ಥಿಕ ಸ್ವಾವಲಂಬನೆಗಾಗಿ 'ಲಖ್‌ಪತಿ ದೀದಿ' ಕಾರ್ಯಕ್ರಮ, ಆರ್ಥಿಕ, ತಾಂತ್ರಿಕ ಸಬಲೀಕರಣ ಬೆಳೆಸುತ್ತಿರುವ 'ನಮೋ ಡ್ರೋಣ್ ದೀದಿ' ಯೋಜನಾ ಮುಂತಾದ ಕೇಂದ್ರ ಸರ್ಕಾರ ಹಲವಾರು ಮಹತ್ವದ ಉಪಕ್ರಮಗಳನ್ನು ವಿವರಿಸಿದರು. ಸರ್ಕಾರದ ಈ ಪ್ರಯತ್ನಗಳು ವಿವಿಧ ಹಂತಗಳಲ್ಲಿ ಮಹಿಳೆಯರಲ್ಲಿ ಆತ್ಮ ವಿಶ್ವಾಸವನ್ನು ಬೆಳೆಸುತ್ತಿದೆ. ಅವರು

ಜೀವನದಲ್ಲಿ ಹೊಸ ಎತ್ತರವನ್ನು ತಲುಪಲು ಪ್ರೋತ್ಸಾಹಿಸುತ್ತಿದೆ ಎಂದು ಹೇಳಿದರು. ಅಂತಾರಾಷ್ಟ್ರೀಯ ಮಹಿಳಾ ದಿನವು, ಮಹಿಳೆಯರ ಅಮೂಲ್ಯ ಕೊಡುಗೆಗಳನ್ನು ಗುರುತಿಸಿ ಗೌರವಿಸುವ ಹಾಗೂ ಲಿಂಗಸಮಾನತೆಯನ್ನು ಮುನ್ನಡೆಸುವ ಬದ್ಧತೆಯನ್ನು ಪುನರುಚ್ಚರಿಸುವ ಸಮಯ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ವಿಶ್ಲೇಷಿಸಿದರು.

**ಧ್ವನಿ: ರಾಷ್ಟ್ರಪತಿ ದ್ರೌಪದಿ ಮುರ್ಮು**

ಕೇಂದ್ರ ಸಚಿವರಾದ ಅರ್ಜುನ್ ಮೇಘ್‌ವಾಲ್, ಅನ್ನಪೂರ್ಣದೇವಿ ಸಹ ಸಮ್ಮೇಳನ ಉದ್ದೇಶಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ರಾಜ್ಯ ಸಚಿವೆ ಸಾವಿತ್ರಿ ಠಾಕೂರ್, ಕಾರ್ಯದರ್ಶಿ ಅನಿಲ್ ಮಲ್ಲಿಕ್, ಮಹಿಳಾ ಸಂಸತ್ ಸದಸ್ಯರು, ಪದ್ಮಪ್ರಶಸ್ತಿ ಪುರಸ್ಕೃತರು, ಸಶಸ್ತ್ರ ಪಡೆಗಳ ಮಹಿಳಾ ಸಿಬ್ಬಂದಿ ಹಾಗೂ ವಿವಿಧ ಕ್ಷೇತ್ರಗಳ ಇತರ ಗಣ್ಯ ಮಹಿಳೆಯರು ಭಾಗವಹಿಸಿದ್ದರು. ಸಮ್ಮೇಳನದಲ್ಲಿ ಉನ್ನತಮಟ್ಟದ ಚರ್ಚೆ ಹಾಗೂ ತಾಂತ್ರಿಕ ಅಧಿವೇಶನಗಳು ನಡೆದವು.

**<><*<><>*><>**

ಸಂಸತ್ತಿನ ಬಜೆಟ್ ಅಧಿವೇಶನದ ಎರಡನೇ ಭಾಗ ಸೋಮವಾರದಿಂದ ಆರಂಭವಾಗಲಿದೆ. ಏಪ್ರಿಲ್ ೪ರವರೆಗೆ ನಡೆಯಲಿರುವ ಎರಡನೇ ಹಂತದ ಅಧಿವೇಶನದಲ್ಲಿ ಒಟ್ಟು ೨೦ ಸಭೆಗಳು ನಡೆಯಲಿವೆ. ಅಧಿವೇಶನದ ಅವಧಿಯಲ್ಲಿ ೨೦೨೫-೨೬ನೇ ಸಾಲಿನ ಅನುದಾನ ಬೇಡಿಕೆಗಳು ಹಾಗೂ ಸಂಬಂಧಿತ ವಿನಿಯೋಗ ಮಸೂದೆ ಕುರಿತು ಚರ್ಚೆ ಮತ್ತು ಮತದಾನ ನಡೆಯಲಿದೆ. ಇದಲ್ಲದೆ, ಬ್ಯಾಂಕಿಂಗ್ ಕಾನೂನುಗಳು ತಿದ್ದುಪಡಿ ವಿಧೇಯಕ, ಕರಾವಳಿ ಸಾಗಣೆ ವಿಧೇಯಕ ೨೦೨೪, ತ್ರಿಭುವನ್ ಸಹಕಾರಿ ವಿಶ್ವವಿದ್ಯಾಲಯದ ವಿಧೇಯಕ, ವಲಸೆ ಮತ್ತು ವಿದೇಶಿಯರ ವಿಧೇಯಕ ೨೦೨೫ ಮತ್ತು ರೈಲ್ವೆ ತಿದ್ದುಪಡಿ ವಿಧೇಯಕ ಸೇರಿದಂತೆ ಹಲವಾರು ಮಸೂದೆಗಳ ಕುರಿತು ಚರ್ಚೆ ಹಾಗೂ ಅವುಗಳ ಅಂಗೀಕಾರ ಸಂಬಂಧ ನಿರ್ಣಯ ಕೈಗೊಳ್ಳುವ ಸಾಧ್ಯತೆಯಿದೆ. ಸಂಸತ್ತಿನ ಬಜೆಟ್ ಅಧಿವೇಶನದ ಮೊದಲ ಭಾಗ, ಕಳೆದ ಜನವರಿ ೩೧ ರಿಂದ ಫೆಬ್ರವರಿ ೧೩ರವರೆಗೆ ನಡೆಸಲಾಯಿತು. ರಾಷ್ಟ್ರಪತಿ ದ್ರೌಪದಿ ಮುರ್ಮು ಸಂಸತ್ತಿನ ಉಭಯ ಸದನಗಳನ್ನುದ್ದೇಶಿಸಿ ಮಾತನಾಡಿದ್ದರು. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅಧಿವೇಶನದ ಮೊದಲ ಭಾಗದಲ್ಲಿ ಕೇಂದ್ರ ಆಯ-ವ್ಯಯವನ್ನು ಮಂಡಿಸಿದ್ದರು. ಮೊದಲ ಭಾಗದಲ್ಲಿ ಲೋಕಸಭೆ ಶೇಕಡ ೧೧೨ ರಷ್ಟು ಫಲಪ್ರದ ಕಲಾಪ ನಡೆಸಿದೆ ಎಂದು ದಾಖಲಾಗಿದೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಮಹಿಳೆಯರ ಅಭಿವೃದ್ಧಿಗೆ ಒತ್ತು ನೀಡುತ್ತಿದೆ. ಮಹಿಳಾ ಸಬಲೀಕರಣದ ಗುರಿಯೊಂದಿಗೆ ದೇಶವನ್ನು ಮುನ್ನಡೆಸುತ್ತಿದೆ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜಗತ್ ಪ್ರಕಾಶ್ ನಡ್ಡಾ ಹೇಳಿದ್ದಾರೆ. ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ನವದೆಹಲಿಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಹಿಳೆಯರ ಸಬಲೀಕರಣವಾದಗಲೇ ಜಗತ್ತಿನ ಸಬಲೀಕರಣ ಸಾಧ್ಯ ಎಂಬುದು ಪ್ರಧಾನಿ ನರೇಂದ್ರ ಮೋದಿ ಅವರ ಆಶಯವಾಗಿದ್ದು, ಇದೇ ಧ್ಯೇಯದೊಂದಿಗೆ ಬಿಜೆಪಿ ಮಹಿಳೆಯರ ಸಬಲೀಕರಣ ಮೂಲ ತತ್ವವೆಂದು ಪರಿಗಣಿಸಿ ಮುನ್ನಡೆಯುತ್ತಿದೆ ಎಂದರು. ಇತ್ತೀಚೆಗೆ ನಡೆದ ದೆಹಲಿ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಬಿಜೆಪಿಯ ಚುನಾವಣಾ ಪ್ರಣಾಳಿಕೆಯ ಮಹಿಳಾ ಸಮೃದ್ಧಿ ಯೋಜನೆಗೆ ಅನುಮೋದನೆ ನೀಡಿದ್ದಕ್ಕಾಗಿ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತ ಅವರಿಗೆ ಧನ್ಯವಾದ

ತಿಳಿಸಿದರು. ಇದೇ ವೇಳೆ ಹಿಂದಿನ ಆಪ್ ಸರ್ಕಾರ ದೆಹಲಿಯ ಮಹಿಳೆಯರ ಅಭ್ಯುದಯ ಯಾವುದೇ ಕೆಲಸ ಮಾಡಿಲ್ಲ ಎಂದು ಟೀಕಿಸಿದರು.

**<><*<><>*><>**

ಭಾರತ, ತನ್ನ ನೆರೆಹೊರೆ ದೇಶಗಳೊಂದಿಗೆ ಆರೋಗ್ಯಕರ ಸಂಬಂಧ ಕಾಪಾಡಿಕೊಳ್ಳಲು ಬಲವಾಗಿ ಪ್ರತಿಪಾದಿಸುತ್ತದೆ. ಬಾಂಗ್ಲಾದೇಶವು ಇದಕ್ಕೆ ಹೊರತಾಗಿಲ್ಲ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಸುದ್ದಿಸಂಸ್ಥೆಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಅವರು, ಮಾಜಿ ಪ್ರಧಾನಿ ಅಟಲ್‌ಬಿಹಾರಿ ವಾಜಪೇಯಿ ಅವರು, ನಾವು ಸ್ನೇಹಿತರನ್ನು ಬದಲಾಯಿಸಬಹುದು. ಆದರೆ, ನೆರೆಹೊರೆಯವರನ್ನಲ್ಲ ಎಂದು ನೀಡಿದ್ದ ಹೇಳಿಕೆಯನ್ನು ಉಲ್ಲೇಖಿಸಿ ಭಾರತ ಸದಾ ತನ್ನ ನೆರೆಹೊರೆಯವರೊಂದಿಗೆ ಉತ್ತಮ ಸಂಬಂಧ ಕಾಪಾಡಿಕೊಳ್ಳಲು ಪ್ರಯತ್ನಿಸುತ್ತದೆ ಎಂದು ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣದೀರ್ ಜೈಸ್ವಾಲ್, ನಿನ್ನೆ ಭಾರತವು ಸ್ಥಿರ-ಶಾಂತಿಯುತ ಹಾಗೂ ಎಲ್ಲರನ್ನು ಒಳಗೊಂಡ ಮತ್ತು ಪ್ರಗತಿಪರ ಬಾಂಗ್ಲಾದೇಶವನ್ನು ಬೆಂಬಲಿಸುತ್ತದೆ ಎಂದು ಹೇಳಿದನ್ನು ಇಲ್ಲಿ ಉಲ್ಲೇಖಿಸಬಹುದು. ಇದರಲ್ಲಿ ಎಲ್ಲ ಸಮಸ್ಯೆಗಳನ್ನು ಪ್ರಜಾಪ್ರಭುತ್ವ ವಿಧಾನಗಳ ಮೂಲಕ ಮತ್ತು ಎಲ್ಲರನ್ನೂ ಒಳಗೊಳ್ಳುವ, ಭಾಗವಹಿಸುವ ಚುನಾವಣೆಗಳನ್ನು ನಡೆಸುವ ಮೂಲಕ ಪರಿಹರಿಸಲಾಗುತ್ತದೆ.

**<><*<><>*><>**

ತೆಲಂಗಾಣದ ಮೆಹಬೂಬ್ ನಗರ ಜಿಲ್ಲೆಯ ದಿವಿಟಿಪಲ್ಲಿಯಲ್ಲಿಂದು ಕೇಂದ್ರ ವಿದ್ಯುನ್ಮಾನ ಹಾಗೂ ಮಾಹಿತಿ ತಂತ್ರಜ್ಞಾನ, ರೈಲ್ವೆ ಖಾತೆ ಸಚಿವ ಅಶ್ವಿನಿ ವೈಷ್ಣವ್, ಪ್ರಸಿದ್ಧ ಬ್ಯಾಟರಿ ತಯಾರಿಕಾ ಸಂಸ್ಥೆ- ಅಮರರಾಜದ ಮೊದಲ ಲಿಥಿಯಂ- ಐಯನ್ ಸೆಲ್ ತಯಾರಿಕಾ ಘಟಕಕ್ಕೆ ಶಿಲಾನ್ಯಾಸ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಆತ್ಮನಿರ್ಭರ ಭಾರತವನ್ನು ಸಾಧಿಸಲು ಬ್ಯಾಟರಿ ತಂತ್ರಜ್ಞಾನದಲ್ಲಿ ಅತ್ಯುನ್ನತ ನೈಪುಣ್ಯತೆ ಸಾಧಿಸುವುದು ಅಗತ್ಯ ಎಂದು ಪ್ರತಿಪಾದಿಸಿದರು. ಉಕ್ಕು ಮತ್ತು ಇತರ ಸಂಪನ್ಮೂಲಗಳಂತೆ ಬ್ಯಾಟರಿ ತಂತ್ರಜ್ಞಾನವೂ ಸಹ ದೇಶದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಲಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ದಿವಿಟಿಪಲ್ಲಿ ರೈಲ್ವೆ ನಿಲ್ದಾಣವನ್ನು ಶೀಘ್ರವೇ ಆಧುನೀಕರಣಗೊಳಿಸಲಾಗುವುದು. ತೆಲಂಗಾಣದ ರೈಲ್ವೆ ಯೋಜನೆಗಳಿಗೆ ಕೇಂದ್ರ ಬಜೆಟ್‌ನಲ್ಲಿ ಆರು ಪಟ್ಟು ಹೆಚ್ಚಿನ ಹಣ ಹಂಚಿಕೆ ಮಾಡಲಾಗಿದೆ. ಹಾಗಾಗಿ ರೈಲ್ವೆ ಆಧುನೀಕರಣ ವಿನ್ಯಾಸಗಳನ್ನು ತ್ವರಿತವಾಗಿ ಸಿದ್ಧಪಡಿಸುವಂತೆ ಸ್ಥಳೀಯ ಅಧಿಕಾರಿಗಳಿಗೆ ಕೇಂದ್ರ ಸಚಿವರು ಸೂಚನೆ ನೀಡಿದರು. ಇದೇ ವೇಳೆ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಸಂದರ್ಭದಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಮಹಿಳೆಯರಿಗೆ ಶುಭಾಶಯ ಕೋರಿದರು. ಕಳೆದ ಹತ್ತು ವರ್ಷಗಳಲ್ಲಿ ಮಹಿಳಾ ಸಬಲೀಕರಣಕ್ಕಾಗಿ ಕೇಂದ್ರ ಸರ್ಕಾರ ಕೈಗೊಂಡ ವಿವಿಧ ಉಪಕ್ರಮಗಳ ಕುರಿತು ಪ್ರಸ್ತಾಪಿಸಿದರು. ಗಿಗಾ ಘಟಕ ಭಾರತೀಯ ಪರಿಸ್ಥಿತಿಗಳಿಗೆ ತಕ್ಕಂತೆ ಲಿಥಿಯಂ-ಐಯಾನ್ ಬ್ಯಾಟರಿಗಳನ್ನು ತಯಾರಿಸಲಿದ್ದು, ಎಲೆಕ್ಟ್ರಿಕ್ ವಾಹನ ತಯಾರಕರು ಹಾಗೂ ಮಾರಾಟಗಾರರಿಗೆ ಪೂರೈಕೆ ಮಾಡಲಿದೆ. ಸೆಲ್ ಎನರ್ಜಿ ಹಾಗೂ ಖನಿಜಗಳಿಗೆ ಸಂಬಂಧಿಸಿದ ಹಲವಾರು ಕಂಪನಿಗಳ ಉತ್ಪಾದನಾ ಘಟಕಗಳನ್ನು ಸಚಿವರು ಈ ಸಂದರ್ಭದಲ್ಲಿ ಉದ್ಘಾಟಿಸಿದರು. ಅಲ್ಲದೆ, ಬ್ಯಾಟರಿ ಪ್ಯಾಕ್ ಸೌಲಭ್ಯ ಕೇಂದ್ರಗಳಿಗೂ ಭೇಟಿ ನೀಡಿ ಪರಿಶೀಲಿಸಿದರು.

**<><*<><>*><>**

ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸಾನಾಯಕೆ ಅವರು, ಅಂತಾರಾಷ್ಟ್ರೀಯ ಹಣಕಾಸು ನಿಧಿ- ಐಎಂಎಫ್ ವ್ಯವಸ್ಥಾಪಕ ನಿರ್ದೇಶಕಿ ಕ್ರಿಸ್ಟಲಿನಾ ಜಾರ್ಜಿವಾ ಅವರೊಂದಿಗೆ ವರ್ಚುವಲ್ ಮೂಲಕ ಸಭೆ ನಡೆಸಿ, ವಿಸ್ತೃತ

ನಿಧಿ ಸೌಲಭ್ಯ ಅಡಿಯಲ್ಲಿ ಆರ್ಥಿಕ ಸುಧಾರಣೆಗಳಿಗೆ ದ್ವೀಪ ರಾಷ್ಟ್ರದ ಬದ್ಧತೆಯನ್ನು ಪುನರುಚ್ಚರಿಸಿದ್ದಾರೆ. ವಿಸ್ತೃತ ನಿಧಿ ಸೌಲಭ್ಯ ಒಪ್ಪಂದ ೪೮ ತಿಂಗಳ ಅರ್ಧ ಅವಧಿಯನ್ನು ತಲುಪುತ್ತಿದ್ದಂತೆ ೨೦೨೨ರ ಆರ್ಥಿಕ ಬಿಕ್ಕಟ್ಟನ್ನು ನಿವಾರಿಸುವಲ್ಲಿ ಅಂತಾರಾಷ್ಟ್ರೀಯ ಹಣಕಾಸು ನಿಧಿ ನೀಡಿದ ಬೆಂಬಲಕ್ಕಾಗಿ ಶ್ರೀಲಂಕಾ ಅಧ್ಯಕ್ಷರು ಕೃತಜ್ಞತೆ ವ್ಯಕ್ತಪಡಿಸಿದ್ದಾರೆ. ಸ್ಥೂಲ ಆರ್ಥಿಕತೆ, ಸ್ಥಿರತೆ, ಸಾಲ ಪುನರಚನೆ ಹಾಗೂ ಆಡಳಿತ ಸುಧಾರಣೆಯಲ್ಲಿನ ಪ್ರಗತಿಯನ್ನು ಅಧ್ಯಕ್ಷರು ಈ ಸಂದರ್ಭದಲ್ಲಿ ಪ್ರಮುಖವಾಗಿ ವಿವರಿಸಿದರು. ಜಾಗತಿಕ ಅನಿಶ್ಚಿತತೆಗಳ ನಡುವೆ ಆರ್ಥಿಕ ಚೇತರಿಕೆಯನ್ನು ಉಳಿಸಿಕೊಳ್ಳಲು ಅಂತಾರಾಷ್ಟ್ರೀಯ ಹಣಕಾಸು ನಿಧಿಯೊಂದಿಗೆ ನಡೆಯುತ್ತಿರುವ ಸಹಯೋಗವು ಅತ್ಯಂತ ನಿರ್ಣಾಯಕವಾಗಿದೆ ಎಂದು ಶ್ರೀಲಂಕಾ ಅಧ್ಯಕ್ಷರು ಒತ್ತಿ ಹೇಳಿದುರ. ವಿತ್ತೀಯ ಕಾರ್ಯಕ್ರಮದ ಮೂರನೇ ಪರಾಮರ್ಶೆಯನ್ನು ಪೂರ್ಣಗೊಳಿಸುವುದು, ಪ್ರಮುಖ ಸಾಲಗಳ ಪುನರಚನೆ ಪ್ರಯತ್ನ ಸೇರಿದಂತೆ ಶ್ರೀಲಂಕಾದ ಸಾಧನೆಗಳನ್ನು ಐಎಂಎಫ್ ವ್ಯವಸ್ಥಾಪಕ ನಿರ್ದೇಶಕಿ ಕ್ರಿಸ್ಟಲಿನಾ ಜಾರ್ಜಿಯಾ ಶ್ಲಾಘಿಸಿದರು. ಶ್ರೀಲಂಕಾದ ಸುಧಾರಣಾ ಕಾರ್ಯಸೂಚಿಯನ್ನು ಬೆಂಬಲಿಸುವ ಅಂತಾರಾಷ್ಟ್ರೀಯ ಹಣಕಾಸು ನಿಧಿಯ ಬದ್ಧತೆಯನ್ನು ಕ್ರಿಸ್ಟಲಿನಾ ಜಾರ್ಜಿಯ ಪುನರುಚ್ಚರಿಸಿದರು. ಜೊತೆಗೆ ಬಲಿಷ್ಠ ಆಡಳಿತದ ಮಹತ್ವವನ್ನು ಒತ್ತಿ ಹೇಳಿರುವ ಅವರು, ದೀರ್ಘಾವಧಿಯ ಆರ್ಥಿಕ ಸ್ಥಿರತೆ ಖಚಿತಪಡಿಸಿಕೊಳ್ಳಲು ಸಹಕಾರವನ್ನು ಮುಂದುವರಿಸಲು ಇಬ್ಬರೂ ನಾಯಕರು ಸಮ್ಮತಿಸಿದ್ದಾರೆ.

**<><*<><>*><>**

ಭಾರತೀಯ ಮಹಿಳಾ ಕಬ್ಬಡ್ಡಿ ತಂಡವು, ಐದನೇ ಬಾರಿಗೆ ಏಷ್ಯನ್ ಚಾಂಪಿಯನ್‌ಶಿಪ್ ಮುಡಿಗೇರಿಸಿಕೊಂಡಿದೆ. ತೆಹರಾನ್‌ನಲ್ಲಿ ನಡೆದ ೬ನೇ ಏಷ್ಯನ್ ಮಹಿಳಾ ಕಬ್ಬಡ್ಡಿ ಚಾಂಪಿಯನ್‌ಶಿಪ್‌ನ ಫೈನಲ್‌ನಲ್ಲಿ ಹಾಲಿ ಚಾಂಪಿಯನ್ ಭಾರತ ತಂಡ, ಅತಿಥೇಯ ಇರಾನ್ ತಂಡವನ್ನು ೩೫-೨೫ ಅಂಕಗಳಿಂದ ಮಣಿಸಿ ಪ್ರಶಸ್ತಿಯನ್ನು ಗೆದ್ದುಕೊಂಡಿತು. ಭಾರತೀಯ ಮಹಿಳೆಯರು, ಪಂದ್ಯಾವಳಿವುದ್ದಕ್ಕೂ ಅಜೇಯರಾಗೇ ಉಳಿದಿದ್ದು, ನಿನ್ನೆ ಸಂಜೆ ನಡೆದ ಮೊದಲ ಸೆಮಿಫೈನಲ್‌ನಲ್ಲಿ ಭಾರತ ತಂಡ ನೇಪಾಳವನ್ನು ೫೬-೧೮ ಅಂಕಗಳಿಂದ ಸೋಲಿಸಿ ಫೈನಲ್ ಪ್ರವೇಶಿಸಿತ್ತು. ಎರಡನೇ ಸೆಮಿಫೈನಲ್‌ನಲ್ಲಿ ಇರಾನ್, ಬಾಂಗ್ಲಾದೇಶವನ್ನು ೪೧-೧೮ ಅಂಕಗಳಿಂದ ಮಣಿಸಿತ್ತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೮.೦೫ ಕ್ಕೆ <>*><>**